**ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 65/ 2022**

**ಚಾಸಾ ಃ- 01 / ಪ್ರಾಸಾ ಃ- 01**

| | |
|---|---|
| ಹೆಸರು | ಗಿರಿಧರ್ ಕಸಬೆ |
| ತಂದೆ ಹೆಸರು | ಸುದೀಂದ್ರರಾವ್ ಕಸಬೆ |
| ವಯಸ್ಸು | 42 |
| ಉದ್ಯೋಗ | ವ್ಯಾಪಾರ |
| ವಿಳಾಸ | ಬೆಂಗಳೂರು |

**ದಿನಾಂಕಃ 04.04.2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ಚಾಸಾ 2 ರಿಂದ 7 ರವರು ಪರಿಚಯ ಇರುತ್ತಾರೆ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ ಹಾಗೂ ನನ್ನ ಸಮಕ್ಷಮ ಯಾವುದೇ ಮಹಜರನ್ನು ಜರುಗಿಸಿರುವುದಿಲ್ಲ ಹಾಗೂ ಯಾವುದೇ ಕಲ್ಲನ್ನು ಮತ್ತು ಇಟಾಚಿ ವಾಹನದ ಕಿಟಕಿ ಗಾಜುಗಳನ್ನು ಜಪ್ತಿ ಪಡಿಸಿಕೊಂಡಿರುವುದಿಲ್ಲ. ಈಗ ಸಾಕ್ಷಿಗೆ ದೂರನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ದೂರನ್ನು ನಿಪಿ-1 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಪಂಚನಾಮೆಯನ್ನು ನಿಪಿ-2 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸದರಿ ನಿಪಿ01 ಮತ್ತು 2 ರಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ವಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ವಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ದಿನಾಂಕ 11.08.2021 ರಂದು ಸರ್ವೆ ನಂ.47 ರಲ್ಲಿ 7 ಎಕರೆ 5 ಗುಂಟೆ ಜಮೀನಿನಲ್ಲಿ ಸಂಜೆ 5.30 ಗಂಟೆಗೆ ಆರೋಪಿಗಳು ಅಕ್ರಮ ಗುಂಪು ಕಟ್ಟಿಕೊಂಡು ನಿಮ್ಮ ಜಮಿನೀಗೆ ಅತಿಕ್ರಮಣ ಪ್ರವೇಶ ಮಾಡಿ ನಿಮ್ಮನ್ನು ಕುರಿತು ಅವಾಚ್ಯ ಶಬ್ದಗಳಿಂದ ಬೈಯ್ದು ಇಲ್ಲಿ ಹೇಗೆ ಕ್ರಶರ್ ನಡೆಸುತ್ತೀಯಾ ನೋಡಿಕೊಳ್ಳುತ್ತೇವೆ ಎಂದು ಬೆದರಿಕೆ ಹಾಕಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನೀವು ನಾನು ಕಾನೂನು ಪ್ರಕಾರ ದಾಖಲೆ ಹೊಂದಿದ್ದು ಆದ್ದರಿಂದ ಕ್ರಶರ್ ಘಟಕ ಸ್ಥಾಪಿಸುತ್ತಿದ್ದೇನೆ ಎಂದು ಹೇಳಿದಾಗ ಗಿರಿಯಪ್ಪ ಮತ್ತು ರವಿ ನಿಮ್ಮ ಕತ್ತಿನ ಪಟ್ಟಿ ಹಿಡಿದು ಎಳೆದಾಡಿ ಕೈಗಳಿಂದ ನಿಮಗೆ ಹೊಡೆದಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಗಿರಿಯಪ್ಪ ಅಲ್ಲೆ ಕೆಲಸ ಮಾಡುತ್ತಿದ್ದ ಇಟಾಚಿ ಡ್ರೈವರ್ ಗೆ ಕಲ್ಲಿನಿಂದ ಹೊಡೆದಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನೀವು ಈ ರೀತಿಯಾಗಿ ದೌರ್ಜನ್ಯ ಮಾಡಬೇಡಿ ಎಂದು ಎಷ್ಟು ಹೇಳಿದರೂ ಕೇಳದೆ ಎಲ್ಲರೂ ನಿಮಗೆ ಹಲ್ಲೆ ಮಾಡಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಜೆಸಿಬಿ ಯಿಂದ ನಿಮ್ಮ ಜಮೀನಿನಲ್ಲಿ ಹಳ್ಳ ತೆಗೆದಿರುತ್ತಾರೆ ಹಾಗೂ ಕಲ್ಲಿನಿಂದ ಇಟಾಚಿಗೆ ಹೊಡೆದು ಇಟಾಚಿಯ ಕಿಟಕಿ ಗಾಜನ್ನು ಹೊಡೆದುಹಾಕಿ ನಷ್ಟ ಮಾಡಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ರಾಜಣ್ಣ , ಕೃಷ್ಣ , ರವಿ , ವೆಂಕಟೇಶ್ ಮತ್ತು ಗಿರಿಯಪ್ಪ ರವರುಗಳು ಇನ್ನೊಂದು ಸಲ ಇಲ್ಲಿ ಕ್ರಶರ್ ಘಟಕ ಪ್ರಾರಂಭಿಸುತ್ತೇನೆ ಎಂದು ಇಲ್ಲಿಗೆ ಕಾಲು ಇಟ್ಟರೆ ನಿಮ್ಮನ್ನು ಸುಮ್ಮನೆ ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ.

ದಿನಾಂಕ 12.08.2021 ರಂದು ನಿಮ್ಮ ಮತ್ತು ಚಾಸಾ 4 ಹಾಗೂ 5 ರವರ ಸಮಕ್ಷಮ ಬೆಳಿಗ್ಗೆ 9.00 ರಿಂದ 9.30 ಗಂಟೆಯವರೆಗೆ ಕೃತ್ಯ ಸ್ಥಳದ ಪಂಚನಾಮೆಯನ್ನು ಜರುಗಿಸಿ ಒಂದು ಹಿಡಿಗಾತ್ರದ ಕಲ್ಲನ್ನು ಹಾಗೂ ಎರಡು ಇಟ್ಟಿಗೆ ಚೂರನ್ನು ಹಾಗೂ ಕಿಟಕಿ ಗಾಜಿನ ಚೂರುಗಳನ್ನು ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಈ ಪ್ರಕರಣದ ಬಗ್ಗೆ ನಿಮಗೆ ಎಲ್ಲಾ ಮಾಹಿತಿ ಗೊತ್ತಿದ್ದರೂ ಆರೋಪಿಗಳೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ.

**ಪಾಟೀ ಸವಾಲು** ಃ-

ಆರೋಪಿ ಪರ ವಕೀಲರು ಪಾಟೀಸವಾಲುಇರುವುದಿಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**ಪ್ರ. ನ್ಯಾ. ದಂ. ಮತ್ತು ಜೆ. ಎಂ. ಎಫ್. ಸಿ.**
**ಮಾಗಡಿ.**